**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 659(758) |
| ಸದಸ್ಯರ ಹೆಸರು | : | ಶ್ರೀ ಹೆಚ್. ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 18.08.2025 |
| ಉತ್ತರಿಸುವವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; ಆ ಕಾಲೇಜುಗಳಿಗೆ ಸಿಬ್ಬಂದಿ ನೇಮಕಾತಿಗೆ ಸರ್ಕಾರದಿಂದ ಅನುಮೋದನೆಗೊಂಡ (Sanctioned Post) ಬೋಧಕ, ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿರುವ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 440 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿವೆ.<br>ಸದರಿ ಕಾಲೇಜುಗಳಿಗೆ ಸಿಬ್ಬಂದಿ ನೇಮಕಾತಿಗೆ ಅನುಮೋದನೆಗೊಂಡ (Sanctioned Post) ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆಯು ಈ ಕೆಳಕಂಡಂತಿದೆ.<br><br>ವೃಂದ — ಅನುಮೋದನೆಗೊಂಡ ಹುದ್ದೆಗಳ ಸಂಖ್ಯೆ<br>ಬೋಧಕರು (ಪ್ರಾಂಶುಪಾಲರು. ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ದೈಹಿಕ ಶಿಕ್ಷಣ ಬೋಧಕರುಗಳು) — 8324<br>ಬೋಧಕೇತರ — 4613 |
| ಆ) | ಕಳೆದ 10 ವರ್ಷಗಳಲ್ಲಿ ರಾಜ್ಯದಲ್ಲಿ ಪ್ರಾರಂಭಿಸಿದ ಸರ್ಕಾರಿ ಪ್ರಥಮ ದರ್ಜೆ/ಸಂಜೆ ಕಾಲೇಜುಗಳ ಸಂಖ್ಯೆ ಎಷ್ಟು; ಈ ಕಾಲೇಜುಗಳಿಗೆ ಯಾವ ಪ್ರಮಾಣದಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ನೇಮಕ ಮಾಡಲಾಗಿದೆ; | ಕಳೆದ 10 ವರ್ಷಗಳಲ್ಲಿ ರಾಜ್ಯದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 14 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಹಾಗೂ ಒಟ್ಟು 11 ಸರ್ಕಾರಿ ಸಂಜೆ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ.<br><br>14 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮಂಜೂರಾದ ಹುದ್ದೆಗಳಿಗೆ ನೇಮಕ ಮಾಡಲಾಗಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ವಿವರ ಈ ಕೆಳಗಿನಂತಿದೆ.<br><br>ವೃಂದ — ಮಂಜೂರು — ಭರ್ತಿ — ಖಾಲಿ<br>ಬೋಧಕರು — 123 — 109 — 14<br>ಬೋಧಕೇತರ — 22 — 5 — 17<br><br>ಸರ್ಕಾರದ ಆದೇಶ ಸಂಖ್ಯೆ: ಇಡಿ 88 ಹೆಚ್‌ಪಿಸಿ 2021, ದಿ. 24.08.2021 ರನ್ವಯ ಪ್ರಾರಂಭಿಸಲಾಗಿರುವ 11 ಸರ್ಕಾರಿ ಸಂಜೆ ಕಾಲೇಜುಗಳಿಗೆ ಬೋಧಕ/ಬೋಧಕೇತರ ಹುದ್ದೆಗಳು ಸೃಜನೆಯಾಗಿರುವುದಿಲ್ಲ. |
| ಇ) | ರಾಜ್ಯದ ವಿಶ್ವವಿದ್ಯಾಲಯಗಳಲ್ಲಿನ ವಿದ್ಯಾರ್ಥಿಗಳ ಅನುಪಾತಕ್ಕೆ ಅನುಗುಣವಾಗಿ | ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಯು.ಜಿ.ಸಿ. ನಿಯಮಗಳನುಸಾರ ಕೋರ್ಸ್ |

| | | |
|---|---|---|
| | ಸಕಾಲಕ್ಕೆ ಪ್ರಾಧ್ಯಾಪಕರ ನೇಮಕಾತಿ ಆಗುತ್ತಿದೆಯೇ; ಇಲ್ಲದಿದ್ದಲ್ಲಿ ಕಾರಣವೇನು? | /ಕಾರ್ಯಭಾರಕ್ಕನುಗುಣವಾಗಿ ಪ್ರಾಧ್ಯಾಪಕರ / ಅತಿಥಿ ಉಪನ್ಯಾಸಕರ ನೇಮಕಾತಿಯನ್ನು ಮಾಡಿಕೊಂಡು ಕಾರ್ಯನಿರ್ವಹಿಸಲಾಗುತ್ತಿದೆ.<br><br>ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ 388 ಸೇನೆನಿ 2024, ದಿನಾಂಕ:25.11.2024ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಅಧಿಸೂಚನೆಯನ್ನು ಮುಂದಿನ ಆದೇಶದವರೆಗೆ ಹೊರಡಿಸಬಾರದೆಂದು ಎಲ್ಲಾ ಆಯ್ಕೆ ಪ್ರಾಧಿಕಾರಗಳು / ನೇಮಕಾತಿ ಪ್ರಾಧಿಕಾರಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. |

**ಸಂಖ್ಯೆ:ಇಡಿ 329 ಡಿಸಿಇ 2025(ಇ)**

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು